ರುಚಿಕರವಾದ ಉಪಹಾರ
ಒಹಿ – ಖಾರ ತಿಂಡಿಗಳು
ನ್ಯೂ ತೋರ್ಸ್ ರೆಸ್ಟೋರೆಂಟ್
ಹೊಸ ಬಸ್‌ಸ್ಟ್ಯಾಂಡ್ ಬಳಿ
ಕುಂದಾಪುರ
ಫೋ : 232878

www.kundaprabha.com e-mail : kundaprabha@gmail.com

6 ದಶಕಗಳ
ವಿಶ್ವಾಸನೀಯ ಸೇವೆಯಲ್ಲಿ
ಶೇಖ್
ಜ್ಯುವೆಲ್ಲರ್ಸ್
ಶಂಕರ್ ಶೇಖ್ ಬಿಲ್ಡಿಂಗ್
ಮುಖ್ಯರಸ್ತೆ, ಕುಂದಾಪುರ
ಫೋನ್ : 230242

ಕುಂದಪ್ರಭ

ವಾರಪತ್ರಿಕೆ

॥ ಸಂಪುಟ : 27 ॥ ಸಂಚಿಕೆ : 02Udp/1263/2015-17 || R.NO.50495/91 ॥ ತಾರೀಕು : 24–01–2017 ॥ ರೂ 5/– ॥ ವಾರ್ಷಿಕ ಚಂದಾ : 300/– ಅಂಚೆಯಲ್ಲಿ : 350/

ಕುಂದ ರಂಗೋಲಿ ಉತ್ಸವ

ರಂಗೋಲಿ ರಚನೆಯಲ್ಲಿ ದಾಖಲೆ ಮಾಡಿದ ಕುಂದಾಪುರ

ಕುಂದಾಪುರದ ಇತಿಹಾಸದಲ್ಲೇ ಪ್ರಪ್ರಥಮವಾಗಿ ಮನೆ, ಶಾಲೆ, ದೇವಸ್ಥಾನಗಳು, ಸಭಾ ಮಂದಿರಗಳು ಹಾಗೂ ಸಾರ್ವಜನಿಕ ಸ್ಥಳದಲ್ಲಿ ಒಂದೇ ದಿನ ಐದುಸಾವಿರಕ್ಕೂ ಹೆಚ್ಚು ರಂಗೋಲಿ ರಚನೆ ಮಾಡುವ ಮೂಲಕ ಕುಂದಾಪುರದ ರಂಗೋಲಿ ಪ್ರಿಯರು ದಾಖಲೆಯನ್ನೇ ನಿರ್ಮಿಸಿದ್ದಾರೆ. ಈ ನಡುವೆ ರಾಜ್ಯಮಟ್ಟದ ರಂಗೋಲಿ ಸ್ಪರ್ಧೆಯು ಕುಂದಾಪುರದ ಶ್ರೀ ವೆಂಕಟರಮಣ ಆಂಗ್ಲಮಾಧ್ಯಮ ಶಾಲಾ ವಠಾರದಲ್ಲಿ ನಡೆದು ಬಹಳ ಆಕರ್ಷಣೆ ಪಡೆಯಿತು. ನೂರಾರು ಮಂದಿ ವಿದ್ಯಾರ್ಥಿಗಳು , ಹಾಗೂ ಹಿರಿಯರು ಪೈಪೋಟಿಯಲ್ಲಿ ರಂಗೋಲಿ ರಚಿಸುವ ಮೂಲಕ ರಂಗೋಲಿಯ ವೈವಿಧ್ಯಮಯ ಚಿತ್ರಣದ ಪ್ರದರ್ಶನ ನೀಡಿದರು. ಕುಂದಾಪುರದ ಬಹುತೇಕ ರಸ್ತೆ ಬದಿಯಲ್ಲಿರುವ ಮನೆಗಳಲ್ಲಿ ಮುಂಜಾನೆಯಿಂದಲೇ ಗೃಹಿಣಿಯರು ಮಕ್ಕಳು ರಂಗೋಲಿ ರಚಿಸಿದ್ದು ರಂಗೋಲಿ







ಡಾ.ಭಾರತಿ ಮರವಂತೆ

34 ಅಡಿ ಅಗಲದ ರಂಗೋಲಿ ರಚಿಸುವ ಮೂಲಕ ಕುಂದಾಪುರ ಕಲಾ ಮಂದಿರದಲ್ಲಿ ದಾಖಲೆ ಮಾಡಿದ ರಂಗೋಲಿ ತಜ್ಞೆ ಡಾ.ಭಾರತಿ ಮರವಂತೆ





ಉತ್ಸವಕ್ಕೆ ಸ್ಫೂರ್ತಿ ತುಂಬಿದರು. ಕುಂದಾಪುರದ ಶ್ರೀ ವೆಂಕಟರಮಣ ದೇವಸ್ಥಾನದ ರಸ್ತೆ, ಚಿಕ್ಕನ್‌ಸಾಲ್ ರಸ್ತೆ , ರಾಮ ಮಂದಿರ ರಸ್ತೆ ಖಾರ್ವಿಕೇರಿ ಮದ್ದುಗುಡ್ಡೆ ಈಸ್ಟ್ ಬ್ಲಾಕ್ ರಸ್ತೆ, ವೆಸ್ಟ್ ಬ್ಲಾಕ್ ರಸ್ತೆ , ಬಡಾಕೆರೆ, ಕುಂದೇಶ್ವರ ದೇವಸ್ಥಾನದ ರಸ್ತೆ , ಸಲೀಂ ಆಲಿ ರಸ್ತೆ, ವಡೇರ ಹೋಬಳಿ ರಸ್ತೆ , ನಾನಾ ಸಾಹೇಬ್ ರಸ್ತೆ ಸೇರಿದಂತೆ ಬಹುತೇಕ ರಸ್ತೆಗಳಲ್ಲಿ ಹಬ್ಬದ ವಾತಾವರಣದಲ್ಲಿ ರಂಗೋಲಿ ರಚನೆ ನಡೆಯಿತು. ಬಹುತೇಕ ಶಾಲೆಗಳಲ್ಲೂ ರಂಗೋಲಿ ಪ್ರದರ್ಶನ ನಡೆದಿದೆ. ಬಿ.ಆರ್.ರಾಯರ ಹಿಂದೂ ಶಾಲೆಯಲ್ಲಿ ವಿದ್ಯಾರ್ಥಿಗಳಿಗಾಗಿ ಸ್ಪರ್ಧೆಯೂ ನಡೆದು ಬಹುಮಾನ ನೀಡಲಾಗಿದೆ. ಮುಖ್ಯ ಬೀದಿಗಳಲ್ಲಿ ರಂಗೋಲಿ ರಚನೆ ಬಹಳ ಕುತೂಹಲಕಾರಿ ವಿಷಯವಾಗಿ ಎಲ್ಲರ ಮನ ಗೆದ್ದಿತು. (7ನೇ ಪುಟಕ್ಕೆ)

ಜ.29 ರಂದು ಕುಂದಕಲಾ ಉತ್ಸವ

ಕುಂದಾಪುರದ ಭಂಡಾರ್‌ಕಾರ್ಸ್ ಕಾಲೇಜು ಕ್ರೀಡಾ ಮೈದಾನದಲ್ಲಿ ಜನವರಿ 29 ರಂದು ಆದಿತ್ಯವಾರ ಸಂಜೆ 5.30ಕ್ಕೆ ಕುಂದಕಲಾ ಉತ್ಸವ ನಡೆಯಲಿದೆ. ಕುಂದಾಪುರದ ಇತಿಹಾಸದಲ್ಲಿ ಪ್ರಪ್ರಥಮವಾಗಿ ಹೊನಲು ಬೆಳಕಿನಲ್ಲಿ ಸಮಾರಂಭ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದೆ. ಈ ಸಮಾರಂಭದಲ್ಲಿ ಮಣಿಪಾಲ್ ಅಕಾಡೆಮಿಯ ಆಡಳಿತಾಧಿಕಾರಿ ಡಾ.ಹೆಚ್.ಶಾಂತಾರಾಮ ಅವರಿಗೆ ಕುಂದಪ್ರಭ ಕೋ.ಮ.ಕಾರಂತ ಪ್ರಶಸ್ತಿ ಪ್ರದಾನ ಮಾಡಲಾಗುತ್ತದೆ. ಶ್ರೀ ಜಯಪ್ರಕಾಶ್ ರಾವ್, ನಿವೃತ್ತ ಪ್ರಾದೇಶಿಕ ಸಂಪರ್ಕಾಧಿಕಾರಿ, ಭಾರತ ಸರ್ಕಾರದ ರಕ್ಷಣೆ ಮತ್ತು ಸಂಶೋಧನಾ ಸಂಸ್ಥೆ ಇವರು ಅಭಿನಂದನಾ ಮಾತುಗಳನ್ನಾಡಲಿದ್ದಾರೆ. ಹಲವು ಗಣ್ಯ ಅತಿಥಿಗಳು ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ.

ನಂತರ ನಡೆಯುವ ಸಾಂಸ್ಕೃತಿಕ ಉತ್ಸವದಲ್ಲಿ ಭಂಡಾರ್‌ಕಾರ್ಸ್ ಕಾಲೇಜು , ಬಿ.ಬಿ.ಹೆಗ್ಡೆ ಕಾಲೇಜು , ಶ್ರೀ ವೆಂಕಟರಮಣ ಆಂಗ್ಲಮಾಧ್ಯಮ ಶಾಲೆಯ ವಿದ್ಯಾರ್ಥಿಗಳಿಂದ

(6ನೇ ಪುಟಕ್ಕೆ)